**Akashvani : Bangalore**
**Regional Bulletin In Kannada**
**28.08.2025 / 6.40 pm**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**28.08.2025 / 6.40 pm**
**<><*<><>*><>**

**<u>ಮುಖ್ಯಾಂಶಗಳು</u>**

೧. ರಾಜ್ಯದಲ್ಲಿ ಸಹಕಾರಿ ವ್ಯವಸ್ಥೆ ಬಲವರ್ಧನೆಗೆ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಸೂಚನೆ

೨. ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯ ಅವಧಿ ಸೆಪ್ಟೆಂಬರ್ ೧ ರವರೆಗೆ ವಿಸ್ತರಿಸಿದ ಸರ್ಕಾರ

೩. ಬೆಂಗಳೂರಿನಲ್ಲಿ ನಾಳೆ ರೈಲ್ವೆ ಮೇಲ್ಸೆತುವೆ ಹಾಗೂ ಕೆಳ ಸೇತುವೆಗಳ ನಿರ್ಮಾಣ ಕುರಿತಂತೆ ಕೇಂದ್ರ ಸಚಿವ ವಿ.ಸೋಮಣ್ಣ ಸಭೆ

೪. ಕೇರಳ ಗಡಿಭಾಗ ತಲಪಾಡಿಯಲ್ಲಿ ಬಸ್ ಅಪಘಾತ; ರಾಜ್ಯದ ೬ ಮಂದಿ ಸಾವು

೫. ಕರಾವಳಿ ಜಿಲ್ಲೆಗಳು ಸೇರಿದಂತೆ ಹಲವೆಡೆ ಧಾರಾಕಾರ ಮಳೆ ; ದಕ್ಷಿಣ ಕನ್ನಡ, ಉಡುಪಿ ಯಲ್ಲಿ ರೆಡ್ ಅಲರ್ಟ್

**><><><><><><><**

ರಾಜ್ಯದಲ್ಲಿ ಪ್ರಸ್ತುತ ಸಾಲಿನಲ್ಲಿ ಸಹಕಾರ ಇಲಾಖೆ ೩೭ ಲಕ್ಷ ರೈತರಿಗೆ ೨೮ಸಾವಿರ ಕೋಟಿ ರೂಪಾಯಿ ಸಾಲ ವಿತರಣೆ ಗುರಿ ಹೊಂದಲಾಗಿದ್ದು, ಜುಲೈ ಅಂತ್ಯದವರೆಗೆ ೮ ಲಕ್ಷದ ೬೯ ಸಾವಿರದ ೨೮೪ ರೈತರಿಗೆ ೮ ಸಾವಿರದ ೩೬೨ ಕೋಟಿ ರೂಪಾಯಿ ಸಾಲ ವಿತರಣೆ ಮಾಡಲಾಗಿದೆ. ರೈತರಿಗೆ ಸಕಾಲದಲ್ಲಿ ಕೃಷಿ ಸಾಲ ಸಿಗುವುದನ್ನು ಖಾತ್ರಿಪಡಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಬೆಂಗಳೂರಿನಲ್ಲಿಂದು ಸಹಕಾರ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು ರಾಜ್ಯದಲ್ಲಿ ೨೮ ಸಾವಿರದ ೫೧೬ ಸಹಕಾರ ಸಂಘಗಳು ಲಾಭದಲ್ಲಿದ್ದು, ೧೪ ಸಾವಿರದ ೬೭೦ ಸಂಘಗಳು ನಷ್ಟದಲ್ಲಿವೆ. ಹಾಲು ಉತ್ಪಾದಕ ಸಹಕಾರ ಸಂಘಗಳ ವೆಚ್ಚದ ಮೇಲೆ ನಿಗಾ ಇರಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.

**><><><><><><><**

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ರಾಜ್ಯದಲ್ಲಿರುವ ಹಿಂದುಳಿದ ವರ್ಗಗಳು, ಇತರೆ ಜಾತಿಗಳು ಅನುಸೂಚಿತ ಜಾತಿ ಮತ್ತು ಪಂಗಡಗಳು ಸೇರಿದಂತೆ ಎಲ್ಲ ಜಾತಿಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಸರ್ಕಾರದ ಆದೇಶಾನುಸಾರ ಕೈಗೊಂಡಿದೆ. ಯಾವುದೇ ಜಾತಿ/ಉಪಜಾತಿಗಳು ಬಿಟ್ಟು ಹೋಗಿದ್ದಲ್ಲಿ, ಸಲಹೆ/ಸೂಚನೆ ಮನವಿಗಳನ್ನು ನೀಡುವ ಅವಧಿಯನ್ನು ಸೆಪ್ಟೆಂಬರ್ ೧ ರವರೆಗೆ ವಿಸ್ತರಿಸಲಾಗಿದೆ ಎಂದು ಹಿಂದುಳಿದ ವರ್ಗಗಳ ಆಯೋಗದ ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಸಾರ್ವಜನಿಕರು ತಮ್ಮ ಸಲಹೆ/ಸೂಚನೆ/ ಮನವಿಗಳನ್ನು ಇsಛಿbಛಿb@gmಚಿiಟ.ಛಿom ಗೆ ಇ-ಮೇಲ್ ಮೂಲಕ ಕಳುಹಿಸಬಹುದಾಗಿದೆ.

**><><><><><><><**

ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ನಾಳೆ ಬೆಂಗಳೂರಿನಲ್ಲಿ ರೈಲ್ವೆ ಮೇಲ್ಸೇತುವೆ ಹಾಗೂ ಕೆಳ ಸೇತುವೆಗಳ ನಿರ್ಮಾಣ ಹಾಗೂ ಇತರ ರೈಲ್ವೆ ಪ್ರಸ್ತಾವನೆಗಳ ಕುರಿತಂತೆ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ. ಇದಕ್ಕೂ ಮೊದಲು ಅವರು ತೆಂಗು ಬೆಳೆ ರೋಗ ಹಾಗೂ ಇತ್ಯಾದಿ ಸಮಸ್ಯೆಗಳ ಬಗ್ಗೆ ಪರಿಹಾರ ಕಂಡುಕೊಳ್ಳುವಲ್ಲಿ ಭಾರತ ಸರ್ಕಾರದ ವಿಶೇಷ ಕೃಷಿ ಇಲಾಖೆ ಸಮಿತಿಯ ಸದಸ್ಯರು ಹಾಗೂ ಕೃಷಿ ವಿಜ್ಞಾನಿಗಳ ಜೊತೆ ಚರ್ಚೆ ನಡೆಸಲಿದ್ದಾರೆ.

**ಧ್ವನಿ : ಸಚಿವ ವಿ.ಸೋಮಣ್ಣ ( ೨೯ ಸೆಕೆಂಡುಗಳು)**

**><><><><><><><><**

ಈ ಬಾರಿಯ ನಾಡಹಬ್ಬ ದಸರಾ ಮಹೋತ್ಸವದ ಉದ್ಘಾಟಕರಾಗಿ ಆಯ್ಕೆಯಾಗಿರುವ ಬೂಕರ್ ಪ್ರಶಸ್ತಿ ವಿಜೇತ ಸಾಹಿತಿ ಡಾ.ಬಾನು ಮುಷ್ತಾಕ್ ವಿಚಾರದಲ್ಲಿ ರಾಜಕೀಯ ಮಾಡುವುದು ಬೇಡ ಎಂದು ವಿಪಕ್ಷಗಳಿಗೆ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಮನವಿ ಮಾಡಿದ್ದಾರೆ. ಮಂಡ್ಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದು ಐತಿಹಾಸಿಕ ದಸರಾ ಯಾವುದೇ ಸಮಾಜದ ಕಾರ್ಯಕ್ರಮವಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

**><><><><><><><><**

ಗ್ರಾಮೀಣ ಮಕ್ಕಳು ಶಿಕ್ಷಣದಿಂದ ಯಾವುದೇ ಕಾರಣಕ್ಕೂ ವಂಚಿತರಾಗಬಾರದೆನ್ನುವುದೇ ತಮ್ಮ ಧ್ಯೇಯ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ. ಬೆಳಗಾವಿ ಜಿಲ್ಲೆಯ ಕರಿಕಟ್ಟಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸುಮಾರು ೩೦ ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಾಣಗೊಳ್ಳಲಿರುವ ೨ ಹೆಚ್ಚುವರಿ ಕೊಠಡಿ ನಿರ್ಮಾಣದ ಕಾಮಗಾರಿಗೆ ಅವರು ಭೂಮಿ ಪೂಜೆ ನೆರವೇರಿಸಿದರು.  ಪ್ರತಿ ಊರಲ್ಲಿ ಅಗತ್ಯವಿರುವಷ್ಟು ಕೊಠಡಿ, ಶೈಕ್ಷಣಿಕ ಉಪಕರಣ ಸೇರಿದಂತೆ ಎಲ್ಲ ಸೌಲಭ್ಯ ಕಲ್ಪಿಸಲಾಗುತ್ತಿದ್ದು. ಯಾವುದೇ ಕಾರಣಕ್ಕೂ ಮಕ್ಕಳು ಶಾಲೆ ಬಿಡಬಾರದು ಎಂದು ಸಚಿವರು ಕರೆ ನೀಡಿದ್ದಾರೆ.

**><><><><><><><><**

ಕೇರಳ ಕರ್ನಾಟಕ ಗಡಿಭಾಗ ತಲಪಾಡಿಯಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಬಸ್ ನಿಯಂತ್ರಣ ತಪ್ಪಿ ಆಟೋರಿಕ್ಷಾಗೆ ಡಿಕ್ಕಿ ಹೊಡೆದ ಪರಿಣಾಮ ೬ ಮಂದಿ ಸಾವನ್ನಪ್ಪಿದ್ದಾರೆ.  ವೇಗವಾಗಿ ಬಂದ ಬಸ್‌ನ ಬ್ರೇಕ್ ವಿಫಲವಾಗಿ ಈ ಅಪಘಾತ ಸಂಭವಿಸಿದೆ. ಮೊದಲು ಬಸ್ ಆಟೋರಿಕ್ಷಾಗೆ ಡಿಕ್ಕಿ ಹೊಡೆದು ನಂತರ ಪ್ರಯಾಣಿಕರು ಕಾಯುತ್ತಿದ್ದ ಬಸ್ ನಿಲ್ದಾಣಕ್ಕೆ ಡಿಕ್ಕಿ ಹೊಡೆದಿದೆ. ಈ ವೇಳೆ ಬಸ್‌ಗಾಗಿ ಕಾಯುತ್ತಿದ್ದ ರಾಜ್ಯದ ಆರು ಮಂದಿ ಸಾವನ್ನಪ್ಪಿದ್ದಾರೆ. ಘಟನೆಯಲ್ಲಿ ಹಲವು ಪ್ರಯಾಣಿಕರು ಗಾಯಗೊಂಡಿದ್ದಾರೆ.

**><><><><><><><><**

ಮೈಸೂರಿನ ಸುತ್ತೂರು ಮಠದಲ್ಲಿ ನಾಳೆ ೨೩ನೇ ಪೀಠಾಧಿಪತಿಗಳಾದ ಡಾಕ್ಟರ್  ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿ ಅವರ ೧೧೦ನೇ ಜಯಂತಿ ನಡೆಯಲಿದೆ. ಕಾರ್ಯಕ್ರಮವನ್ನು ಕೇಂದ್ರ ಕೃಷಿ, ರೈತರ ಕಲ್ಯಾಣ ಮತ್ತು ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಉದ್ಘಾಟಿಸಲಿದ್ದಾರೆ. ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್.ಡಿ.

ಕುಮಾರಸ್ವಾಮಿ ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಪಿಯುಸಿಯ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ವಿಭಾಗಗಳಲ್ಲಿ ಅತಿ ಹೆಚ್ಚು ಅಂಕಗಳಿಸಿದ ಪ್ರತಿ ವಿಭಾಗದ ಮೊದಲ ಮೂವರು ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು.

><><><><><><><><

ಜಿಎಸ್‌ಟಿ ಕಡಿತ ಮತ್ತು ಸರಳೀಕರಣ ಮಾಡಲು ತೀರ್ಮಾನಿಸಿರುವ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರಿಗೆ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ಅಭಿನಂದನೆ ಸಲ್ಲಿಸಿದ್ದಾರೆ. ಈ ಕುರಿತು  ನಿರ್ಮಲಾ ಸೀತಾರಾಮನ್ ಅವರಿಗೆ ಪತ್ರ ಬರೆದಿರುವ ಬೊಮ್ಮಾಯಿ, ಜಿಎಸ್‌ಟಿ ಸರಳೀಕರಣದಿಂದ ದೇಶದ ಜಿಡಿಪಿ ಎರಡಂಕಿಗೆ ಹೆಚ್ಚಳವಾಗಲಿದ್ದು, ಭಾರತ ವಿಶ್ವದ ನಾಲ್ಕನೇ ಆರ್ಥಿಕ ಶಕ್ತಿಯಿಂದ ಮೂರನೇ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮುವ ವಿಶ್ವಾಸವಿದೆ ಎಂದು ಹೇಳಿದ್ದಾರೆ.

><><><><><><><><

ಮಂಗಳೂರಿನಲ್ಲಿ ರಾಜ್ಯ ಸಚಿವ ಸಂಪುಟ ಸಭೆ ನಡೆಸುವ ಕುರಿತಂತೆ ಈಗಾಗಲೇ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಅವರಿಂದ ಸಕಾರಾತ್ಮಕ ಪ್ರತಿಕ್ರಿಯೆ ದೊರೆತಿದೆ  ಎಂದು ವಿಧಾನಸಭೆ ಸ್ಪೀಕರ್ ಯು.ಟಿ. ಖಾದರ್ ತಿಳಿಸಿದ್ದಾರೆ. ಮಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ಸಂಪುಟದ ಮುಂದಿನ ಸಭೆ ವಿಜಯಪುರದಲ್ಲಿ ನಡೆಯಲಿದ್ದು, ಬಳಿಕ ಮಂಗಳೂರಿನಲ್ಲಿ ಸಭೆ ನಡೆಯಲಿದೆ. ಈ ಸಂದರ್ಭ ಜಿಲ್ಲೆಯ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಜಿಲ್ಲೆಯ ಅಗತ್ಯ ಬೇಡಿಕೆಗಳ ಕುರಿತಂತೆ ಪಟ್ಟಿಯನ್ನು ಸಿದ್ಧಪಡಿಸಿಕೊಳ್ಳಬೇಕು ಎಂದು ಹೇಳಿದ್ದಾರೆ.

><><><><><><><><

ಭಾರತ ಸರ್ಕಾರದ ವಾರ್ತಾ ಶಾಖೆ ಬೆಂಗಳೂರು ಹಾಗೂ ಯಾದಗಿರಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಸಂಯುಕ್ತಾಶ್ರಯದಲ್ಲಿ ನಾಳೆ ಯಾದಗಿರಿ ನಗರದ ಎಸ್ ಡಿ ಎನ್ ಹೋಟೆಲ್ ನಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳ ಕುರಿತು ಮಾಧ್ಯಮ ಪ್ರತಿನಿಧಿಗಳಿಗೆ ವಾರ್ತಾಲಾಪ ಕಾರ್ಯಾಗಾರ ಆಯೋಜಿಸಲಾಗಿದೆ. ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪೂರ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದಾರೆ. ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಚಲವಾದಿ ಟಿ. ನಾರಾಯಣಸ್ವಾಮಿ ಶಾಸಕ ಚನ್ನಾರೆಡ್ಡಿ ಪಾಟೀಲ್ ತನ್ನೂರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ವಾರ್ತಾಲಾಪದ ಉದ್ಘಾಟನೆಯನ್ನು ರಾಯಚೂರು ಲೋಕಸಭಾ ಕ್ಷೇತ್ರದ ಸಂಸದರಾದ ಜಿ. ಕುಮಾರ ನಾಯಕ ಹಾಗೂ ಕಲಬುರಗಿ ಲೋಕಸಭಾ ಕ್ಷೇತ್ರದ ಸಂಸದರಾದ ರಾಧಾಕೃಷ್ಣ ದೊಡ್ಡಮನಿ ನೆರವೇರಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಶಾಸಕರಾದ ಡಾ. ಬಿ.ಜಿ. ಪಾಟೀಲ, ಡಾ. ಚಂದ್ರಶೇಖರ ಬಿ. ಪಾಟೀಲ, ಶಶೀಲ್ ಜಿ. ನಮೋಶಿ, ಶರಣಗೌಡ ಕಂದಕೂರ, ರಾಜಾ ವೇಣುಗೋಪಾಲ ನಾಯಕ, ಹಾಗೂ ಭಾರತ ಸರ್ಕಾರದ ವಾರ್ತಾ ಶಾಖೆಯ ಹೆಚ್ಚುವರಿ ಮಹಾನಿರ್ದೇಶಕರಾದ ಎಸ್.ಜಿ. ರವೀಂದ್ರ, ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.

><><><><><><><><

ರಾಜ್ಯದ ಕರಾವಳಿ ಮತ್ತು ಕರ್ನಾಟಕದ ದಕ್ಷಿಣ ಒಳನಾಡಿನಲ್ಲಿ ನೈರುತ್ಯ ಮುಂಗಾರು ತೀವ್ರವಾಗಿದೆ. ರಾಜ್ಯಾದ್ಯಂತ ಹೆಚ್ಚಿನ ಸ್ಥಳಗಳಲ್ಲಿ ಮಳೆಯಾಗಿದೆ. ಉತ್ತರ ಕನ್ನಡ ಜಿಲ್ಲೆಯ ಕ್ಯಾಸಲ್ ರಾಕ್ ನಲ್ಲಿ ೨೦ ಸೆಂ.ಮೀ, ಗೇರುಸೊಪ್ಪೆಯಲ್ಲಿ  ೧೫ ಸೆಂ.ಮೀ., ಹೊನ್ನಾವರದಲ್ಲಿ ೧೪ ಸೆಂ.ಮೀ., ಮಳೆಯಾಗಿದೆ. ದಕ್ಷಿಣ ಕನ್ನಡ ಮತ್ತು ಉಡುಪಿ ಮತ್ತೆ ಉತ್ತರ ಕನ್ನಡ ಜಿಲ್ಲೆಗಳಲ್ಲಿ  ಇಂದು

ಗಾಳಿಯಿಂದ ಕೂಡಿದ ಭಾರೀ ಮಳೆಯಾಗುವ ಸಾಧ್ಯತೆ ಇದ್ದು ರೆಡ್ ಅಲರ್ಟ್ ಘೋಷಿಸಲಾಗಿದೆ. ಚಿಕ್ಕಮಗಳೂರು, ಕೊಡಗು, ಹಾಸನ, ಶಿವಮೊಗ್ಗ ಜಿಲ್ಲೆಗಳಲ್ಲೂ ಗುಡುಗು ಸಹಿತ ಮಳೆಯಾಗಲಿದೆ ಎಮದು ಹವಾಮಾನ ಇಲಾಖೆ ನಿರ್ದೇಶಕ ಡಾ.ಸಿ.ಎಸ್.ಪಾಟೀಲ್ ಮಾಹಿತಿ ನೀಡಿದ್ದಾರೆ.

**ಧ್ವನಿ: ಡಾ.ಸಿ.ಎಸ್.ಪಾಟೀಲ್, ಹವಾಮಾನ ಇಲಾಖೆ ನಿರ್ದೇಶಕರು ( 32 ಸೆಕೆಂಡುಗಳು)**

ಬೆಳಗಾವಿ, ಬೀದರ್ ಮತ್ತು ಕಲಬುರ್ಗಿ ಜಿಲ್ಲೆಗಳಲ್ಲೂ ಗುಡುಗು ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.  ಬೆಂಗಳೂರಿನಲ್ಲೂ ಮಳೆ ಸುರಿಯುತ್ತಿದ್ದು, ಮುಂದುವರೆಯಲಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.

**><><><><><><><><**